# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 775 (866) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 15.12.2025 |

| ಕ್ರಮ. ಸಂಖ್ಯೆ. | ಪ್ರಶ್ನೆ | ಉತ್ತರ |
|---|---|---|
| ಅ) | ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ನಿವೃತ್ತ ನೌಕರರಿಗೆ ಪಿಂಚಣಿ ನೀಡಲು ಆರ್ಥಿಕ ಅಡಚಣೆ ಇದೆ ಎಂದು ಪತ್ರಿಕೆಯಲ್ಲಿ ಪ್ರಕಟವಾಗಿದ್ದು, ಈ ಪರಿಸ್ಥಿತಿ ವಿಶ್ವವಿದ್ಯಾನಿಲಯಕ್ಕೆ ಬರಲು ಕಾರಣವೇನು; ರಾಜ್ಯದಲ್ಲಿ ಎಷ್ಟು ವಿಶ್ವವಿದ್ಯಾನಿಲಯಗಳು ಇಂತಹ ಆರ್ಥಿಕ ಪರಿಸ್ಥಿತಿ ಎದುರಿಸುತ್ತಿದೆ; (ವಿವರ ನೀಡುವುದು) | ಮಂಗಳೂರು ವಿಶ್ವವಿದ್ಯಾಲಯಗಳಲ್ಲಿ ನಿವೃತ್ತ ನೌಕರರುಗಳಿಗೆ ಪಿಂಚಣಿ ನೀಡಲು ಆರ್ಥಿಕ ಕೊರತೆ/ಅಡಚಣೆ ಇರುತ್ತದೆ.<br><br>ವಿಶ್ವವಿದ್ಯಾಲಯದ ಆಂತರಿಕ ಸಂಪನ್ಮೂಲವು ವಿದ್ಯಾರ್ಥಿಗಳಿಂದ ಸ್ವೀಕೃತವಾಗುವ ಪ್ರವೇಶಾತಿ ಪರೀಕ್ಷೆ ಶುಲ್ಕಗಳು ಹಾಗೂ ಸಂಯೋಜಿನ ಕಾಲೇಜುಗಳಿಂದ ಸ್ವೀಕೃತವಾಗುವ ಸಂಯೋಜನಾ ಶುಲ್ಕಗಳು ಮಾತ್ರ ಒಳಗೊಂಡಿದ್ದು , ಈ ಮೊಬಲಗನ್ನು ವಿಶ್ವವಿದ್ಯಾಲಯದ ಮುಖಾಂತರ ನಡೆಸಲಾಗುವ ಎಲ್ಲಾ ಸಂಯೋಜಿತ ಕಾಲೇಜುಗಳ ಸ್ನಾತಕ ಮತ್ತು ಸ್ನಾತಕೋತ್ತರ ಕೋರ್ಸ್‌ಗಳ ಪರೀಕ್ಷೆಗಳನ್ನು ನಡೆಸಲು ಹಾಗೂ ಅವುಗಳ ಮೌಲ್ಯಮಾಪನ ಕಾರ್ಯ ಮಾಡಿಸಲು ಬಳಸಿಕೊಳ್ಳಲಾಗುತ್ತಿದೆ. ಆದುದರಿಂದ , ಪಿಂಚಣಿ ಉದ್ದೇಶಕ್ಕಾಗಿ ಆಂತರಿಕ ಆರ್ಥಿಕ ಸಂಪನ್ಮೂಲವನ್ನು ಬಳಸಿಕೊಳ್ಳಲು ಸಾಕಷ್ಟು ಅನುದಾನವು ವಿಶ್ವವಿದ್ಯಾಲಯದಲ್ಲಿ ಲಭ್ಯವಿರುವುದಿಲ್ಲ. |
| ಆ) | ಜಿಲ್ಲೆಗಳೊಂದು ವಿಶ್ವವಿದ್ಯಾನಿಲಯ ಸ್ಥಾಪಿಸಬೇಕೆಂದು ರಾಜ್ಯ ಸರ್ಕಾರದ ನಿಲುವು ಯಾವ ಹಂತದಲ್ಲಿದೆ; ಎಷ್ಟು ಜಿಲ್ಲೆಗಳಲ್ಲಿ ವಿಶ್ವವಿದ್ಯಾನಿಲಯ ಸ್ಥಾಪಿಸಲಾಗುವುದು; ಈ ನಿಲುವಿನ ಬಗ್ಗೆ ಸರ್ಕಾರ ವರದಿ ಪಡೆದುಕೊಂಡಿದೆಯೇ; (ವಿವರ ನೀಡುವುದು) | ಜಿಲ್ಲೆಗೊಂದು ವಿಶ್ವವಿದ್ಯಾಲಯ ಸ್ಥಾಪಿಸುವ ಪ್ರಸ್ತಾವನೆಯು ಪ್ರಸ್ತುತ ಸರ್ಕಾರದ ಮುಂದಿರುವುದಿಲ್ಲ. |

| | | |
|---|---|---|
| ಇ) | ವಿಶ್ವವಿದ್ಯಾನಿಲಯ ಸ್ಥಾಪನೆಗೊಂಡ ಪೀಠಗಳು ನಿರುಪಯುಕ್ತವಾಗಿದ್ದು, ಇವುಗಳು ಬಿಳಿ ಆನೆಯಂತೆ ಕಾರ್ಯನಿರ್ವಹಿಸುತ್ತಿದ್ದರಿಂದ ಯಾವ ಪ್ರಯೋಜನೆ ಎಲ್ಲಾ ಎಂದು ಸಾಭಿತಾಗಿದ್ದು, ಇದನ್ನು ರದ್ದುಪಡಿಸಲು ಇಲಾಖೆ ಕ್ರಮಕೈಗೊಳ್ಳದೇ ಇರಲು ಕಾರಣವೇನು; (ವಿವರ ನೀಡುವುದು) | ಮಂಗಳೂರು ವಿಶ್ವವಿದ್ಯಾಲಯದಲ್ಲಿ 24 ಪೀಠ / ಕೇಂದ್ರುಗಳಿವೆ. ಇವುಗಳಲ್ಲಿ 11 ಪೀಠಗಳು ಹಾಗೂ 13 ಖಾಸಗಿ ಪೀಠಗಳು ಸರ್ಕಾರದಿಂದ ಮಂಜೂರಾದ ಅನುದಾನ/ಖಾಸಗಿಯವರಿಂದ ದೊರೆತ ದೇಣಿಗೆಗಳ ಮೂಲ ನಿಧಿಯ ಮೇಲೆ ಸಂಗ್ರಹವಾದ ಬಡ್ಡಿ ಮೊತ್ತದಿಂದ ಪೀಠಗಳ ಖರ್ಚು ವೆಚ್ಚಗಳನ್ನು ನಿರ್ವಹಿಸಿಕೊಂಡು ಪೀಠಗಳ ಧೇಯ್ಯೋದ್ದೇಶಗಳನ್ನು ಪೂರೈಸುವ ನಿಟ್ಟಿನಲ್ಲಿ ಕಾರ್ಯಕ್ರಮಗಳನ್ನು ನಿರ್ವಹಿಸಲಾಗುತ್ತಿದೆ. ಇವುಗಳ ಕಾರ್ಯನಿರ್ವಹಣೆಗೆ ಮಂಗಳೂರು ವಿಶ್ವವಿದ್ಯಾಲಯದ ಆಂತರಿಕ ಸಂಪನ್ಮೂಲಗಳನ್ನು ಬಳಸಿಕೊಂಡಿರುವುದಿಲ್ಲ.<br><br>ಪ್ರೊ. ಓ ಅನಂತರಾಮಯ್ಯ, ವಿಶ್ರಾಂತ ಕುಲಪತಿಗಳು, ತುಮಕೂರು ವಿಶ್ವವಿದ್ಯಾಲಯ ರವರು ರಾಜ್ಯ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ಅಧ್ಯಯನ ಪೀಠಗಳ ಸ್ಥಿತಿಗತಿಗಳ ಬಗ್ಗೆ ಸಲ್ಲಿಸಲಾದ ವರದಿಯನ್ನು ಹಾಗೂ ಎಲ್ಲಾ ಅಧ್ಯಯನ ಪೀಠಗಳಿಗೆ ಸಂಬಂಧಿಸಿದಂತೆ Model Statutes ಗಳನ್ನು ಪರಾಮರ್ಶಿಸಲು ಅಧ್ಯಕ್ಷರು ಹಾಗೂ ಸದಸ್ಯರುಗಳನ್ನು ಒಳಗೊಂಡ ತ್ರಿಸದಸ್ಯ ಸಮಿತಿಯನ್ನು ರಚಿಸಿ ಸರ್ಕಾರದ ಆದೇಶ ಸಂಖ್ಯೆ: ಇಡಿ/366/ಯುಆರ್‌ಸಿ/2025, ದಿ: 25.11.2025ರಲ್ಲಿ ಆದೇಶ ಹೊರಡಿಸಲಾಗಿದ್ದು, ವರದಿಯನ್ನು ನಿರೀಕ್ಷಿಸಲಾಗಿದೆ. |
| ಈ) | ವಿಶ್ವವಿದ್ಯಾನಿಲಯ ಸ್ಥಾಪಿಸುವ ಹಂತದಲ್ಲಿ ಆರ್ಥಿಕ ಸಂಪನ್ಮೂಲಗಳನ್ನು ಕ್ರೂಢೀಕರಿಸಲು ಸರ್ಕಾರ ಯಾವ ಮಾನದಂಡ ಅನುಸರಿಸಿದೆ? (ವಿವರ ನೀಡುವುದು) | ರಾಜ್ಯದಲ್ಲಿ ಸಾರ್ವಜನಿಕ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲು ಯು.ಜಿ.ಸಿ.ಯು ಯಾವುದೇ ನಿರ್ದಿಷ್ಟ ಮಾನದಂಡಗಳನ್ನು ವಿವರಿಸಿರುವುದಿಲ್ಲ. ಆದಾಗ್ಯೂ ಯು.ಜಿ.ಸಿ.ಯು ಸಾರ್ವಜನಿಕ ಮತ್ತು ಖಾಸಗಿ ವಿಶ್ವವಿದ್ಯಾಲಗಳನ್ನು ಸ್ಥಾಪಿಸಲು ಒಂದು Expert Committee ರಚಿಸಿದ್ದು, ಈ ಸಮಿತಿಯು NEP ನೀತಿಯನ್ವಯ UGCಗೆ Report to Determine land requirement for Higher Education Institutions 2024 ಅನ್ನು ಸಲ್ಲಿಸಿದ್ದು, |

-3

| | | |
|---|---|---|
| | | ಈ ವರದಿಯಲ್ಲಿ Plans for academic, land faculty, student, Reaserch and infrastructure development, finance, adminitratioin and governance ಬಗ್ಗೆ ವಿವರಣೆಯನ್ನು ನೀಡಿರುತ್ತದೆ.<br><br>ರಾಜ್ಯದಲ್ಲಿ ಹೊಸ ವಿಶ್ವವಿದ್ಯಾಲಯಗಳನ್ನು ಸ್ಥಾಪನೆ ಮಾಡಬೇಕಾದಲ್ಲಿ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000 ಯು.ಜಿ.ಸಿ. AICTE ಹಾಗೂ ಇನ್ನಿತರೆ ಅಪೆಕ್ಸ್ ಸಂಸ್ಥೆಗಳಲ್ಲಿ ನಿಗದಿಪಡಿಸಿರುವ ಮಾನದಂಡಗಳು ಹಾಗೂ ಸರ್ಕಾರದ ಇತರೆ ನೀತಿ ನಿಯಮಗಳನ್ವಯ ಅವಶ್ಯವಿರುವ ಭೂಮಿ, ಮೂಲಭೂತ ಸೌಕರ್ಯಗಳು, ಬೋಧಕ/ಬೋಧಕೇತರ ಸಿಬ್ಬಂದಿಗಳ ವಿವರ ಹಾಗೂ ಇವುಗಳಿಗೆ ತಗಲುವಂತಹ ಅಂದಾಜು ವೆಚ್ಚ (Ricurring and Non-recurring expenses)ವನ್ನು ನುರಿತ ಶಿಕ್ಷಣ ತಜ್ಞರಾದ ಪ್ರೊ. ಎಂ.ಎ ಪಠಾಣ್ ವಿಶ್ರಾಂತ ಕುಲಪತಿಗಳು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿ ವರದಿ ಪಡೆಯಲಾಗಿರುತ್ತದೆ. |

**ಸಂಖ್ಯೆ: ಇಡಿ/123/ಯುಡಿವಿ /2025**

**(ಡಾ॥ ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು